ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	803
ಸದಸ್ಯರ ಹೆಸರು	:	ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	09-03-2021
ಉತ್ತರಿಸಬೇಕಾದವರು	:	ನಗರಾಭಿವೃದ್ಧಿ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಭೂ ಪರಿವರ್ತನೆಯಾಗಿ ನಗರ ಯೋಜನೆ ಪ್ರಾಧಿಕಾರದಿಂದ ನಕ್ಷೆ ಪಡೆಯದೇ ಅನಧಿಕೃತವಾಗಿ ನಿರ್ಮಿಸಿರುವ ಲೇಔಟ್ ನಲ್ಲಿ ಮನೆ ನಿರ್ಮಿಸಿಕೊಂಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಸರ್ಕಾರ ಈ ಪ್ರಕರಣಗಳ ಬಗ್ಗೆ ಯಾವ ಕ್ರಮ ಕೈಗೊಂಡಿದೆ(ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅನಧಿಕೃತವಾಗಿ ನಿರ್ಮಿಸಲಾಗಿರುವ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಸಂಬಂಧವಾಗಿ, ಪ್ರಸ್ತುತ ಈ ಕೆಳಕಂಡ ಸುತ್ತೋಲೆ / ನಿರ್ದೇಶನಗಳನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯ, ಪೌರಾಡಳಿತ ನಿರ್ದೇಶನಾಲಯ ಮತ್ತು ಸರ್ಕಾರದಿಂದ ಜಾರಿಗೊಳಿಸಲಾಗಿದೆ. 1) ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಖಾತೆ ತೆರೆದಿರುವ ಸ್ವತ್ತುಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ನಗರ / ಪಟ್ಟಣಗಳಿಗೆ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಹಾಗೂ ರಚನೆ ನಂತರ ಭೂ ಪರಿವರ್ತನೆಯಾದ ಜಮೀನುಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ, ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯವನ್ನು ನೀಡುವುದು ಸಮಂಜಸವಲ್ಲದ ಕಾರಣ ಇಂತಹ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಸಂಬಂಧ ಪರವಾನಿಗೆ ನೀಡಲು ತಾಂತ್ರಿಕಅಭಿಪ್ರಾಯ ನೀಡಬಾರದೆಂದು ಸೂಚಿಸಲಾಗಿದೆ. ಹಾಗೂ ಈ ಪ್ರಕರಣಗಳನ್ನು ಅಕ್ರಮ ಸಕ್ರಮ ಯೋಜನೆಯಲ್ಲಿ ಪರಿಶೀಲಿಸಬಹುದಾಗಿದೆ ಎಂದು ನಗರ ಮತ್ತು

		ಗ್ರಾಮಾಂತರ ಯೋಜನಾ ಇಲಾಖೆಯ ದಿನಾಂಕ 22.01.2016ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಅನಧಿಕೃತವಾಗಿ ನಿರ್ಮಿಸಿರುವ ನಿವೇಶನಗಳನ್ನು ಪ್ರಥಮವಾಗಿ ಸಕ್ರಮೀಕರಿಸಿಕೊಂಡು ನಂತರ ಕಟ್ಟಡಗಳಿಗೆ ಅನುಮೋದನೆ ನೀಡಬೇಕಾಗಿರುತ್ತದೆ. ಆದರೆ ಅನಧಿಕೃತ ನಿವೇಶನಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 556 ಮೈಅಪ್ರಾ 2013(1) ದಿನಾಂಕ 28.05.2014 ರಲ್ಲಿ, Karnataka Town and Country Planning (Regularisation of unauthorised Development or Constructions) Rules, 2014ನ್ನು ಜಾರಿಗೆ ತಂದಿದ್ದು, ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA(C) No(s).956-957/2017 ರಲ್ಲಿ ದಿನಾಂಕ 13.01.2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. ಮುಂದುವರೆದು, ದಿನಾಂಕ 04.05.2017ರ ಸುತ್ತೋಲೆಯಲ್ಲಿ ಸ್ಥಳೀಯ ಸಂಸ್ಥೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ವಿನ್ಯಾಸ ಅನುಮೋದನೆ ಪಡೆಯದೇ ಖಾತೆ ತೆರೆದಿರುವ ನಿವೇಶನಗಳ ಕಟ್ಟಡ ಪರವಾನಗಿಗೆ ಸಂಬಂಧಿಸಿದಂತೆ ತಾಂತ್ರಿಕ ಅಭಿಪ್ರಾಯ ನೀಡುವ ಕುರಿತು ಸ್ಪಷ್ಟೀಕರಣವನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ನೀಡಲಾಗಿರುತ್ತದೆ. 2) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 7 ಟಿಟಿಪಿ 2017, ದಿನಾಂಕ 22.03.2017 ರಲ್ಲಿ, ರಾಜ್ಯದಲ್ಲಿನ ನಗರ ಪ್ರದೇಶಗಳಲ್ಲಿ ಭೂ ಪರಿವರ್ತಿಸಿದ / ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆ / ರೆವಿನ್ಯೂ ಬಡಾವಣೆಗಳನ್ನು ನಿರ್ಮಾಣ ಮಾಡಿ ನಿವೇಶನಗಳನ್ನು ನೋಂದಣಿ ಮಾಡಿಕೊಂಡು ಕಟ್ಟಡಗಳನ್ನು ಅಕ್ರಮವಾಗಿ

		ನಿರ್ಮಿಸುವುದರಿಂದ ಆಗುವ ಪ್ರತಿಕೂಲ ಪರಿಣಾಮಗಳನ್ನು ಗಮನಿಸಿ, ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. 3) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ದಿನಾಂಕ 05.01.2018ರ ಸುತ್ತೋಲೆಯಲ್ಲಿ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನಿಯಮಬಾಹಿರ ಖಾತಾ ವರ್ಗಾವಣೆಗಳನ್ನು ಗುರುತಿಸಿ ಕರ್ನಾಟಕ ಪುರಸಭೆಗಳಅಧಿನಿಯಮ 1964ರ ಕಲಂ.322, ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ಕಲಂ.114(ಎ), 102 ರನ್ವಯ ನಿಯಮನುಸಾರ ರದ್ದುಪಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆಯುಕ್ತರು / ಪೌರಾಯುಕ್ತರು / ಮುಖ್ಯಾಧಿಕಾರಿಯವರಿಗೆ ಸೂಚಿಸಲಾಗಿದೆ. 4) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 28 ಬೆಮಪ್ರಾ 2018(ಭಾ-1), ದಿನಾಂಕ 28.08.2019 ರಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿಯಮಿತವಾಗಿ ಸ್ಥಳ ಪರಿಶೀಲನೆ ಕೈಗೊಳ್ಳುವಂತೆ ಹಾಗೂ ಯಾವುದಾದರೂ ಅನಧಿಕೃತ ಬೆಳವಣಿಗೆ ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961/ ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ 1976 / ಕರ್ನಾಟಕ ಮುನಿಸಿಪಲ್ ಕಾಯ್ದೆ 1964 ರನ್ವಯ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. 5) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 105 ಮೈಅಪ್ರಾ 2020, ದಿನಾಂಕ 16.06.2020 ರಲ್ಲಿ, ನಗರಾಭಿವೃದ್ಧಿ

		ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು, ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿಯಮಿತವಾಗಿ ಪ್ರತಿ 15 ದಿನಗಳಿಗೊಮ್ಮೆ ಸ್ಥಳ ಪರಿಶೀಲನೆ ಕೈಗೊಳ್ಳುವಂತೆ ಹಾಗೂ ಯಾವುದಾದರೂ ಅನಧಿಕೃತ ಬೆಳವಣಿಗೆ ಕಂಡುಬಂದಿಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 / ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ, 1976 / ಕರ್ನಾಟಕ ಮುನಿಸಿಪಲ್ ಕಾಯ್ದೆ, 1964 ರನ್ವಯ ಕಟ್ಟುನಿಟ್ಟಾಗಿ ಕ್ರಮ ಕೈಗೊಂಡು, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅನಧಿಕೃತ ಬೆಳವಣಿಗೆಗಳನ್ನು ಕೈಗೊಳ್ಳುವ ಮಾಲೀಕರ ವಿರುದ್ಧ ಕಾಯ್ದೆಯ ಅವಕಾಶದಂತೆ ಕ್ರಿಮಿನಲ್ ಮೊಕದ್ದಮೆ ಹೂಡಲು ಸಹ ಸೂಚಿಸಿದೆ. ಒಂದು ವೇಳೆ ಕೃಷಿ ಜಮೀನಿನಲ್ಲಿ ಅನಧಿಕೃತ ಬೆಳವಣಿಗೆಗಳು ಕಂಡು ಬಂದರೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲು ತಿಳಿಸಿದೆ. ತಪ್ಪಿದಲ್ಲಿ ಸಂಬಂಧಿಸಿದ ಆಯುಕ್ತರು / ಸದಸ್ಯ ಕಾರ್ಯದರ್ಶಿಗಳು / ಪೌರಾಯುಕ್ತರು / ಮುಖ್ಯಾಧಿಕಾರಿಗಳನ್ನು ನೇರವಾಗಿ ಹೊಣೆಗಾರನ್ನಾಗಿ ಮಾಡಿ ಶಿಸ್ತಿನ ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗಿದೆ.
ಆ)	ಅನಧಿಕೃತವಾಗಿ ನಿರ್ಮಾಣವಾಗಿರುವ ಲೇಔಟ್ ಗಳ ಬಗ್ಗೆ ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ;	ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ಬಂದಿರುವ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 556 ಮೈಅಪ್ರಾ 2013(1) ದಿನಾಂಕ 28.05.2014 ರಲ್ಲಿ Karnataka Town and Country Planning (Regularisation of unauthorised Development or Constructions) Rules, 2014ನ್ನು ಜಾರಿಗೆ ತಂದಿದ್ದು, ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA(C) No(s).956-
ಇ)	ಅನಧಿಕೃತ ಬಡಾವಣೆಗಳನ್ನು ಅಧಿಕೃತವಾಗಿಸಲು ಸರ್ಕಾರ ಯಾವ ರೀತಿಯ ಶುಲ್ಕವನ್ನು ವಿಧಿಸುತ್ತಿದೆ?(ವಿವರ ನೀಡುವುದು)	

		957/2017 ರಲ್ಲಿ ದಿನಾಂಕ 13.01.2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ ಯಾವುದೇ ಅನಧಿಕೃತ ಬಡಾವಣೆಗಳನ್ನು ಅಧಿಕೃತವಾಗಿಸಲು ಪ್ರಸ್ತುತ ಅವಕಾಶವಿರುವುದಿಲ್ಲ ಹಾಗೂ ಯಾವುದೇ ಶುಲ್ಕಗಳನ್ನು ವಿಧಿಸುತ್ತಿಲ್ಲ.

ಸಂಖ್ಯೆ: ನಅಇ 112 ಮೈಅಪ್ರಾ 2021(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು